**ಓ.ಎಸ್.ನಂಃ 236/2017**

**ಪಿಡಬ್ಲ್ಯೂ-1**

**ಸಾಕ್ಷಿಯನ್ನು ಕರೆಯಿಸಿ ದಿನಾಂಕಃ 23.09.2025 ರಂದು ಪ್ರಮಾಣೀಕರಿಸಲಾಯಿತು.**

**ಪಾಟೀ ಸವಾಲು: 1 ರಿಂದ 6 ನೇ ಪ್ರತಿವಾದಿಗಳ ಪರ ವಕೀಲರಿಂದಃ**

ನಾನು ಮತ್ತು ಪ್ರತಿವಾದಿಗಳು ಒಂದೆ ಕುಟುಂಬದವರು ಎಂದು ತೋರಿಸಲು ವಂಶವೃಕ್ಷ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದೇನೆ. ನಾನು ವಕೀಲರ ಮುಖಾಂತರ ವಂಶವೃಕ್ಷ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದೇನೆ ಎಂದರೆ ಸರಿ. ನಾನು ಮತ್ತು ಪ್ರತಿವಾದಿಗಳು ಒಟ್ಟಿಗೆ ವ್ಯವಹಾರ ಮಾಡಿದ ಬಗ್ಗೆ ದಾಖಲೆಗಳು ಇವೆ. ಅವುಗಳನ್ನು ಹಾಜರುಪಡಿಸಬಲ್ಲೆ. ಐಟಂ ನಂ.1 ರಲ್ಲಿ 2ನೇ ಪ್ರತಿವಾದಿ ಹೆಸರಿಗೆ ದಿಃ 04.04.1978 ರ ಕ್ರಯ ಪತ್ರದಂತೆ ಖಾತಾ ಆಗಿದೆ ಎಂದರೆ ಸರಿ. ಎರಡನೇ ಪ್ರತಿವಾದಿ ಅಲ್ಲಿ ಉಳುಮೆ ಮಾಡುತ್ತಿದ್ದಾರೆ ಎಂದರೆ ಸರಿ. ಐಟಂ ನಂ.1 ಎರಡನೇ ಪ್ರತಿವಾದಿಯ ಸ್ವಯಾರ್ಜಿತ ಸ್ವತ್ತಾಗಿದ್ದು ಅದರಲ್ಲಿ ನನಗೆ ಯಾವುದೆ ಹಕ್ಕು ಇಲ್ಲ ಎಂದರೆ ಸರಿಯಲ್ಲ. ಉಳಿದ ದಾವ ಸ್ವತ್ತುಗಳು ಪ್ರತಿವಾದಿಗಳಿಗೆ ಸೇರಿದ್ದು ಅವುಗಳಲ್ಲಿ ನನಗೆ ಯಾವುದೆ ಹಕ್ಕು ಇಲ್ಲ ಎಂದರೆ ಸರಿಯಲ್ಲ. ದಾವ ಸ್ವತ್ತುಗಳಲ್ಲಿ ನಾನು ವ್ಯವಸಾಯ ಮಾಡುತ್ತಿಲ್ಲ ಎಂದರೆ ಸರಿ. ಪ್ರತಿವಾದಿಗಳಿಗೆ ತೊಂದರೆ ಕೊಡುವ ಸಲುವಾಗಿ ಸುಳ್ಳು ದಾವೆ ಹೂಡಿ, ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇರುವುದಿಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇ ಎ ಒ

**(ಗಿರೀಶ ಆರ್.ಬಿ)**

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ

ಗುಂಡ್ಲುಪೇಟೆ